# ಕರ್ನಾಟಕ ವಿಧಾನ ಪರಿಷತ್

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 571(731)
**ಸದಸ್ಯರ ಹೆಸರು** : ಶ್ರೀ ಪ್ರಕಾಶ್ ಕೆ ರಾಥೋಡ್(ನಾಮ ನಿರ್ದೇಶನ ಹೊಂದಿದವರು)
**ಉತ್ತರಿಸುವ ದಿನಾಂಕ** : 26.12.2022
**ಉತ್ತರಿಸುವ ಸಚಿವರು** : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಗೌರವಧನವೆಷ್ಟು; | ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ನೇಮಕ ಮಾಡಿಕೊಂಡಿರುವ ಅತಿಥಿ ಶಿಕ್ಷಕರುಗಳಿಗೆ ಕ್ರಮವಾಗಿ ಮಾಸಿಕ ರೂ.10,000/- ಹಾಗೂ ರೂ.10,500/-ಗಳನ್ನು ಗೌರವಧನವಾಗಿ ನೀಡಲಾಗುತ್ತಿದೆ.<br><br>ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರುಗಳಿಗೆ ಮಾಸಿಕ ರೂ.12,000/-ಗಳನ್ನು ಗೌರವಧನವಾಗಿ ನೀಡಲಾಗುತ್ತಿದೆ. |
| ಆ) | ನೀಡುತ್ತಿರುವ ಗೌರವ ಧನವು ತುಂಬಾ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್ ಇಎಸ್ 2022, ದಿನಾಂಕ:18.06.2022ರಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಗೌರವಧನವನ್ನು ಕ್ರಮವಾಗಿ ರೂ.7500/- ಹಾಗೂ ರೂ.8000/- ಗಳಿಂದ ರೂ.10,000/- ಹಾಗೂ ರೂ.10,500/-ಕ್ಕೆ ಪರಿಷ್ಕರಿಸಲಾಗಿದೆ.<br><br>ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ:ಇಪಿ 50 ಡಿಜಿಡಿ 2022, ದಿನಾಂಕ:05.07.2022ರಲ್ಲಿ ರೂ.9000/-ಗಳಿಂದ ರೂ.12000/-ಕ್ಕೆ ಪರಿಷ್ಕರಿಸಲಾಗಿದೆ. |
| ಇ) | ಬಂದಿದ್ದಲ್ಲಿ ಗೌರವ ಧನವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | |

ಇಪಿ 637 ಎಸ್‌ಇಎಸ್ 2022

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು